ಸಾಕ್ಷಿಯನ್ನು ಕರೆಯಿಸಿ ಪ್ರಮಾಣೀಕರಿಸಲಾಯಿತು. ದಿನಾಂಕಃ 24.04.2024.

**ಮುಖ್ಯ ವಿಚಾರಣೆಃ ಅರ್ಜಿದಾರ ಪರ ಶ್ರೀ ಬಿ.ಎ.ಡಿ. ವಕೀಲರಿಂದಃ**

ನನ್ನ ಮುಖ್ಯ ವಿಚಾರಣೆಯ ಸಲುವಾಗಿ ಪ್ರಮಾಣ ಪತ್ರವನ್ನು ಮಾನ್ಯ ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ. ಅದರಲ್ಲಿರುವ ಎಲ್ಲಾ ಅಂಶಗಳು ಸತ್ಯದಿಂದಾ ಕೂಡಿದ್ದು, ಅದನ್ನು ನನ್ನ ಸೂಚನೆಯ ಮೇರೆಗೆ ತಯಾರಿಸಲಾಗಿರುತ್ತದೆ ಮತ್ತು ನಾನು ಅದಕ್ಕೆ ಸಹಿ ಮಾಡಿರುತ್ತೇನೆ.

ಈಗಾಗಲೇ ನಾನು ನ್ಯಾಯಾಲಯಕ್ಕೆ ದಾಖಲೆಗಳನ್ನು ಹಾಜರುಪಡಿಸಿದ್ದು, ಆದರೆ ನಜರ್‌ಚೂಕನಿಂದ ಎದುರುದಾರರು ಹಾಜರುಪಡಿಸಿದ ದಾಖಲೆಗಳನ್ನು ನಿಪಿ-1 ರಿಂದ ನಿಪಿ-4 ಎಂದು ಗುರುತಿಸಲಾಗಿದ್ದು, ಆ ಕಾರಣ ಮಾನ್ಯ ನ್ಯಾಯಾಲಯ ಅವುಗಳನ್ನು ಕೈಬಿಟ್ಟು ನಾನು ಹಾಜರುಪಡಿಸಿದ ದಾಖಲೆಗಳನ್ನು ನಿಶಾನೆಗಳಾಗಿ ಗುರುತಿಸಬೇಕೆಂದು ಪ್ರಾರ್ಥುತ್ತೇನೆ.

ಒಎಸ್.ನಂ.69/2018 ರ ವಾದಪತ್ರದ ಪ್ರತಿಯನ್ನು ನಿಪಿ-1 ಎಂದು, ಸದರಿ ಕೇಸಿನ ಸಂಪೂರ್ಣ ಆದೇಶದ ಪ್ರತಿಯನ್ನು ನಿಪಿ-2 ಎಂದು, ಸದರಿ ಕೇಸಿನಲ್ಲಿಯ ತೀರ್ಪಿನ ಪ್ರತಿಯನ್ನು ನಿಪಿ-3 ಎಂದು, ಡಿಕ್ರಿ ಪ್ರತಿಯನ್ನು ನಿಪಿ-4 ಎಂದು ಗುರುತಿಸಲಾಯಿತು.

ಆದ್ದರಿಂದ ನಾನು ನನ್ನ ಅರ್ಜಿಯಲ್ಲಿ ಕೇಳಿದಂತೆ ಆದೇಶ ಮಾಡಬೇಕೆಂದು ಮಾನ್ಯ ನ್ಯಾಯಾಲಯಕ್ಕೆ ಪ್ರಾರ್ಥಿಸಿಕೊಳ್ಳುತ್ತೇನೆ.

**ಪಾಟೀ ಸವಾಲುಃ ಎದುರುದಾರ ಪರ ವಕೀಲರಿಂದಃ**

(ಈ ಹಂತದಲ್ಲಿ ಎದುರುದಾರ ಪರ ವಕೀಲರು ಪಾಟೀ ಸವಾಲು ಮಾಡಲು ಸಮಯ ಕೋರಿದ್ದು, ಸಮಯ ನೀಡಿ ಮುಂದೂಡಲಾಯಿತು.)

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸರಿ ಇದೆ

**ಹಿರಿಯ ಸಿವಿಲ್ ನ್ಯಾಯಾಧೀಶರು,**
**ಆಳಂದ.**